ದಿನಾಂಕ 19.11.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ. ಎನ್ ಕೆ ಡಿ ವಕೀಲರಿಂದಃ**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಿದ್ದು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ, ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿರುತ್ತೆ ಮತ್ತು ಪ್ರಮಾಣ ಪತ್ರದಲ್ಲಿ ಕಂಡುಬರುವ ಸಹಿ ನನ್ನದಿರುತ್ತದೆ.

2) ಪೊಲೀಸರು ಮೊ.ಸಂ.350/2022 ರಲ್ಲಿ ತಯಾರಿಸಿರುವ ಪ್ರ.ವ.ವರದಿ ಮತ್ತು ದೂರಿನ ಧೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು **ನಿಪಿ1 ಮತ್ತು 2** ಎಂದು ಗುರುತಿಸಲಾಯಿತು. ಪೊಲೀಸರು ಮೊ.ಸಂ.350/2022 ರಲ್ಲಿ ಸಲ್ಲಿಸಿರುವ ದೋಷಾರೋಪಣಾ ಪಟ್ಟಿಯ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿಪಿ3** ಎಂದು ಗುರುತಿಸಲಾಯಿತು. ಸ್ಥಳ ಮಹಜರ್ ನ ದೃಡೀಕೃತ ನಕಲನ್ನು ಹಾಜರು ಮಾಡಿದ್ದು ಅದನ್ನು **ನಿಪಿ4** ಎಂದು, ನನ್ನ ಗಾಯದ ಪ್ರಮಾಣ ಪತ್ರದ ದೃಡೀಕೃತ ನಕಲನ್ನು ಹಾಜರು ಮಾಡಿದ್ದು ಅದನ್ನು **ನಿಪಿ5** ಎಂದು ಗುರುತಿಸಲಾಯಿತು.

ಎರಡು ಐಎಂವಿ ವರದಿಗಳ ದೃಡೀಕೃತ ನಕಲುಗಳನ್ನು ಹಾಜರು ಮಾಡಿದ್ದು ಅವುಗಳನ್ನು ನಿಪಿ6 ಮತ್ತು 7 ಎಂದು ಗುರುತಿಸಲಾಯಿತು.

ಸಂಜಯ್ ಗಾಂದಿ ಅಸ್ಪತ್ರೆಯವರು ನೀಡಿದ ಬಿಡುಗಡೆ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ8 ಎಂದು, ವಿಕ್ಟೋರಿಯಾ ಅಸ್ಪತ್ರೆಯವರು ನೀಡಿದ ಬಿಡುಗಡೆ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ9 ಎಂದು, 25 ವೈದ್ಯಕೀಯ ರಸೀದಿಗಳನ್ನು ಹಾಜರು ಮಾಡಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ10 ಎಂದು ಗುರುತಿಸಲಾಯಿತು. 11 ವೈದ್ಯಕೀಯ ಸಲಹಾ ಚೀಟಿಗಳನ್ನು ಹಾಜರು ಮಾಡಿದ್ದು

ಅವುಗಳನ್ನು ಒಟ್ಟಾರೆಯಾಗಿ ನಿಪಿ11 ಎಂದು ಗುರುತಿಸಲಾಯಿತು.

Trauma and Emergency Care Centre, Bengaluru ರವರು ವಿಕ್ಟೋರಿಯಾ ಅಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ನೀಡಿದ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ12 ಎಂದು, ವಿಕ್ಟೋರಿಯಾ ಅಸ್ಪತ್ರೆಯವರ ವೈದ್ಯರ ಅದೇಶವನ್ನು ಹಾಜರು ಮಾಡಿದ್ದು ಅದನ್ನು ನಿಪಿ13 ಎಂದು, ವಿಕ್ಟೋರಿಯಾ ಅಸ್ಪತ್ರೆಯವರ ಮುಂದಿನ ಅನುಸರಣೆಯ ಹಾಳೆಗಳನ್ನು ಹಾಜರು ಮಾಡಿದ್ದು ಅದನ್ನು ನಿಪಿ14 ಎಂದು, ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಸ್ಥೆಯವರ ಎರಡು ಒಪಿಡಿ ಶೀಟ್ ಗಳನ್ನು ಹಾಜರು ಮಾಡಿದ್ದು ಅವುಗಳನ್ನು ನಿಪಿ15 ಮತ್ತು 16 ಎಂದು ಗುರುತಿಸಲಾಯಿತು.

ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಸ್ಥೆಯವರು ನೀಡಿದ Electro Cardiogram ಅನ್ನು ಹಾಜರು ಮಾಡಿದ್ದು ಅದನ್ನು ನಿಪಿ17 ಎಂದು, 3 ವೈದ್ಯಕೀಯ ವರದಿಗಳನ್ನು ಹಾಜರು ಮಾಡಿದ್ದು ಅವುಗಳನ್ನು ನಿಪಿ18 ರಿಂದ 20 ಎಂದು, ಒಂಭತ್ತು ಎಕ್ಸರೇಗಳನ್ನು ಹಾಜರು ಮಾಡಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ 21 ಎಂದು, ಮೂರು ಸಿಟಿ ಸ್ಕ್ಯಾನ್ ಗಳನ್ನು ಹಾಜರು ಮಾಡಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ22 ಎಂದು ಗುರುತಿಸಲಾಯಿತು.

**ಪಾಟೀ ಸವಾಲು 1ನೇ ಎದುರುದಾರರ ಪರಃ 1ನೇ ಎದುರುದಾರರು ತಕರಾರು ಸಲ್ಲಿಸದೇ ಇರುವುದರಿಂದ ಮತ್ತು 2ನೇ ಎದುರುದಾರರು ಏಕಪಕ್ಷಿಯವಾಗಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇದೆ**

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಹಾಗೂ ಜೆಎಂಎಫ್‌ಸಿ, ಚಿಂತಾಮಣಿ.**